ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	355
ಮಾನ್ಯ ಸದಸ್ಯರ ಹೆಸರು	ಶ್ರೀ ಯು.ಬಿ.ವೆಂಕಟೇಶ್(ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ	03.02.2021
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಇರತಕ್ಕಂಥ ಜಾತಿಗಳು ಎಷ್ಟು: ಎಲ್ಲಾ ಜಾತಿಗಳ ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕ ಸಮೀಕ್ಷೆಯನ್ನು ನಡೆಸಲಾಗಿದೆಯೇ:	ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ: 30.03.2002ರ ಹಿಂದುಳಿದ ವರ್ಗಗಳ ಜಾತಿ ಮೀಸಲಾತಿ ಪಟ್ಟಿಯಲ್ಲಿ ಒಟ್ಟು 802 ಜಾತಿಗಳು ಇರುತ್ತವೆ. ಭಾರತ ಸರ್ಕಾರದ ಅಧಿಸೂಚನೆ ಸಂಖ್ಯೆ:BC 12016/34/76-SCT-V, ದಿ:27.07.1997ರ ರನ್ವಯ ರಾಜ್ಯದಲ್ಲಿ 101 ಪರಿಶಿಷ್ಟ ಜಾತಿಗಳು ಹಾಗೂ 50 ಪರಿಶಿಷ್ಟ ಪಂಗಡದ ಜಾತಿಗಳು ಇರುತ್ತವೆ. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ 2015ರಲ್ಲಿ ಕೈಗೊಳ್ಳಲಾಗಿದ್ದ ಸಮೀಕ್ಷೆಯಲ್ಲಿ ರಾಜ್ಯದ ಎಲ್ಲಾ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಲಾಗಿದೆ.
ಆ)	ಸಮೀಕ್ಷೆ ಆಧಾರದ ಮೇಲೆ ನಿಗಮಗಳನ್ನು ರಚನೆ ಮಾಡಲಾಗುತ್ತಿದೆಯೇ: ಅದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು?	ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 2015ರಲ್ಲಿ ನಡೆಸಲಾಗಿದ್ದು, ಆಯೋಗವು ವರದಿಯನ್ನು ಇನ್ನೂ ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ.

ಸಂಖ್ಯೆ:ಹಿಂವಕ 30 ಬಿಸಿಎ 2021

(ಕೋಟ ಶ್ರೀನಿವಾಸ ಪೂಜಾರಿ)
ಮುಜರಾಯಿ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು.